**All India Radio: Bangalore**
**Regional Bulletin In Kannada**
**18.11.2025 / 2.30 p.m.**

**ಆಕಾಶವಾಣಿ ಬೆಂಗಳೂರು**

**ಪ್ರದೇಶ ಸಮಾಚಾರ**

**<><><><>**

ಮುಖ್ಯಾಂಶಗಳು

1. ಬೆಂಗಳೂರು ತಂತ್ರಜ್ಞಾನ ಶೃಂಗಸಭೆ ೨೦೨೫ಕ್ಕೆ ಮುಖ್ಯಮಂತ್ರಿ ಸಿದ್ದರಾಮಯ್ಯ ಚಾಲನೆ\
2. ಬಿಡದಿಯಲ್ಲಿ ನೂತನ ಐಟಿ ನಗರ ನಿರ್ಮಾಣಕ್ಕೆ ಚಿಂತನೆ - ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್
3. ಎರಡು ಸಾವಿರ ನೂತನ ಬಸ್ ಖರೀದಿಗೆ ಸರ್ಕಾರ ನಿರ್ಧಾರ
4. ಸರ್ಕಾರ ಕೂಡಲೇ ರೈತರಿಂದ ಮೆಕ್ಕೆಜೋಳ ಖರೀದಿಸುವಂತೆ ಮಾಜಿ ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ ಆಗ್ರಹ
5. ಹುಬ್ಬಳ್ಳಿ-ಧಾರವಾಡ ನಗರಾಭಿವೃದ್ಧಿ ಪ್ರಾಧಿಕಾರಕ್ಕೆ ೪೭ ಗ್ರಾಮ ಸೇರ್ಪಡೆಗೆ ವಿರೋಧ ; ರೈತರಿಂದ ಪ್ರತಿಭಟನೆ

<><><><>

ಬೆಂಗಳೂರಿನಲ್ಲಿ ನಡೆಯುತ್ತಿರುವ ಮೂರು ದಿನಗಳ ಬೆಂಗಳೂರು ತಂತ್ರಜ್ಞಾನ ಶೃಂಗಸಭೆ ೨೦೨೫ಕ್ಕೆ ಮುಖ್ಯಮಂತ್ರಿ ಸಿದ್ದರಾಮಯ್ಯ ಹಾಗೂ ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಚಾಲನೆ ನೀಡಿದ್ದಾರೆ. ಬಳಿಕ ಮಾತನಾಡಿದ ಮುಖ್ಯಮಂತ್ರಿ ಸಿದ್ದರಾಮಯ್ಯ ಬೆಂಗಳೂರು ಟೆಕ್ ಶೃಂಗಸಭೆ ಕಲ್ಪನೆಗಳು, ಹೂಡಿಕೆ, ನಾವೀನ್ಯತೆ ಮತ್ತು ರೂಪಾಂತರಕ್ಕಾಗಿ ಜಾಗತಿಕ ವೇದಿಕೆಯಾಗಿದೆ ಎಂದು ತಿಳಿಸಿದ್ದಾರೆ. ಕೃತಕಬುದ್ಧಿಮತ್ತೆ, ಕ್ವಾಂಟಮ್, ಬಯೋಟೆಕ್, ಬಾಹ್ಯಾಕಾಶ ಮತ್ತು ಹಸಿರು ತಂತ್ರಜ್ಞಾನಗಳಿಂದ ನಡೆಸಲ್ಪಡುವ ಡಿಜಿಟಲ್ ಕ್ರಾಂತಿಯ ಮುಂದೆ ಬೆಂಗಳೂರು ಟೆಕ್ ಶೃಂಗಸಭೆ ಪರಿವರ್ತನಾಶೀಲಾ ಭವಿಷ್ಯವನ್ನು ಸೃಷ್ಟಿಸಲು ಜಗತ್ತಿಗೆ ಆಹ್ವಾನ ನೀಡುತ್ತಿದೆ ಎಂದು ಅಭಿಪ್ರಾಯಪಟ್ಟಿದ್ದಾರೆ. ಕರ್ನಾಟಕ ೮೫ ವಿಶ್ವ ವಿದ್ಯಾಲಯಗಳು, ೨೪೩ ಇಂಜಿನಿಯರಿಂಗ್ ಕಾಲೇಜುಗಳು ಮತ್ತು ೧ ಸಾವಿರದ ೮೦೦ ಐಟಿಐಗಳಿಗೆ ನೆಲೆಯಾಗಿದೆ ಎಂದು ತಿಳಿಸಿದ್ದಾರೆ.

**ಧ್ವನಿ : ಸಿದ್ದರಾಮಯ್ಯ (೩೧ ಸೆಕೆಂಡ್‌ಗಳು)**

ಸಮಾರಂಭದಲ್ಲಿ ಸಚಿವರಾದ ಪ್ರಿಯಾಂಕ್ ಖರ್ಗೆ, ಎಂ.ಬಿ. ಪಾಟೀಲ್, ನಾರ್ವೆ ಆರೋಗ್ಯ ಸಚಿವ ಜಾನ್ ಕ್ರಿಶ್ಚಿಯನ್ ವೆಸ್ಟರ್, ಜರ್ಮನಿ ಭಾವರೈನ್ ಸ್ಟೇಟ್ ಪಾರ್ಲಿಮೆಂಟ್ ಪ್ರೆಸಿಡೆಂಟ್ ಇಲ್ಸ್ ಐಗ್ನರ್, ಶಾಸಕ, ಕಿಯೋನಿಕ್ಸ್ ಅಧ್ಯಕ್ಷ ಶರತ್ ಬಚ್ಚೇಗೌಡ, ಇನ್ಫೋಸಿಸ್ ಸಹ ಸಂಸ್ಥಾಪಕ ಕ್ರಿಸ್

ಗೋಪಾಲಕೃಷ್ಣ, ಬಯೋಕಾನ್ ಮುಖ್ಯಸ್ಥೆ ಡಾ. ಕಿರಣ್ ಮಜುಂದಾರ್ ಷಾ ಸೇರಿದಂತೆ ಹಲವು ಗಣ್ಯರು ಉಪಸ್ಥಿತರಿದ್ದರು. ಶೃಂಗಸಭೆಯಲ್ಲಿ ೫೦ಕ್ಕೂ ಹೆಚ್ಚು ದೇಶಗಳ ತಂತ್ರಜ್ಞಾನ ಪರಿಣಿತರು, ನಾಯಕರು, ವಿವಿಧ ಕ್ಷೇತ್ರಗಳ ಉದ್ಯಮಿಗಳು ಪಾಲ್ಗೊಳ್ಳಲಿದ್ದಾರೆ.

<><><><>

ಆಧುನಿಕ ಕೈಗಾರಿಕೋದ್ಯಮಗಳ ಮಹತ್ವವನ್ನು ಅರಿತಿರುವ ರಾಜ್ಯ ಸರಕಾರ ೨೦೦ ಎಕರೆ ಜಾಗದಲ್ಲಿ ಸೆಮಿಕಂಡಕ್ಟರ್ ಪಾರ್ಕ್ ಅಭಿವೃದ್ಧಿಪಡಿಸಲಿದೆ ಎಂದು ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಸಚಿವ ಎಂ.ಬಿ ಪಾಟೀಲ್ ತಿಳಿಸಿದ್ದಾರೆ. ಬೆಂಗಳೂರು ತಂತ್ರಜ್ಞಾನ ಸಮಾವೇಶದ ಉದ್ಘಾಟನಾ ಸಮಾರಂಭದಲ್ಲಿ ಮಾತನಾಡಿದ ಅವರು, ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಇಲಾಖೆಯು ಮುಂಚೂಣಿ ತಂತ್ರಜ್ಞಾನ ಕಂಪನಿಗಳಿಂದ ಹಾಗೂ ಹೂಡಿಕೆದಾರರಿಂದ ಬಂಡವಾಳ ಹೂಡಿಕೆಯನ್ನು ಆಕರ್ಷಿಸಲು ಆದ್ಯತೆ ನೀಡಿದೆ ಎಂದು ತಿಳಿಸಿದ್ದಾರೆ. ರಾಜ್ಯದಲ್ಲಿ ೮೦೦ಕ್ಕೂ ಹೆಚ್ಚು ಸಂಶೋಧನಾ ಕೇಂದ್ರಗಳು, ೧೦೦ಕ್ಕೂ ಅಧಿಕ ಚಿಪ್ ವಿನ್ಯಾಸ ಕಂಪನಿಗಳು ಮತ್ತು ೧೮ ಸಾವಿರದ ೩೦೦ ನವೋದ್ಯಮಗಳು ಇವೆ. ನಮ್ಮಲ್ಲಿರುವ ಸಂಶೋಧನಾ ಕೇಂದ್ರಗಳು ಕೃತಕ ಬುದ್ಧಿಮತ್ತೆ, ಡೀಪ್ ಟೆಕ್, ಕ್ವಾಂಟಮ್ ಕಂಪ್ಯೂಟಿಂಗ್, ಸ್ಪೇಸ್-ಟೆಕ್ ಮುಂತಾದ ಅತ್ಯಾಧುನಿಕ ಕ್ಷೇತ್ರಗಳಲ್ಲಿ ತೊಡಗಿಸಿಕೊಂಡಿವೆ ಎಂದು ಹೇಳಿದ್ದಾರೆ.

<><><><>

ಬೆಂಗಳೂರು ದಕ್ಷಿಣದ ಬಿಡದಿಯಲ್ಲಿ ನೂತನ ಐಟಿ ನಗರ ನಿರ್ಮಾಣಕ್ಕೆ ಚಿಂತನೆ ನಡೆಸಲಾಗಿದೆ ಎಂದು ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ತಿಳಿಸಿದ್ದಾರೆ. ಬೆಂಗಳೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ರಾಜ್ಯದಲ್ಲಿ ಬಿಲಿಯನ್ ಡಾಲರ್ ಗಟ್ಟಲೆ ಬಂಡವಾಳ ಹೂಡಿಕೆಗೆ ನಾನಾ ದೇಶದ ನಾಯಕರುಗಳು ಮುಂದೆ ಬಂದಿದ್ದಾರೆ ಎಂದು ಹೇಳಿದ್ದಾರೆ. ಕಂಪನಿಗಳಿಗೆ ಪ್ರೋತ್ಸಾಹ ನೀಡಿದರೆ ಇಲ್ಲಿನ ಪ್ರತಿಭೆಗಳು, ಹೊಸ ಆವಿಷ್ಕಾರ, ತಂತ್ರಜ್ಞಾನ, ನವೋದ್ಯಮಗಳು ರಾಜ್ಯವನ್ನು ಹೊಸ ದಿಕ್ಕಿನೆಡೆಗೆ ಕೊಂಡೊಯ್ಯಲಿವೆ ಎಂದು ಸ್ಪಷ್ಟಪಡಿಸಿದ್ದಾರೆ. ಐಟಿ ಸಚಿವ ಪ್ರಿಯಾಂಕ್ ಖರ್ಗೆ ಹಾಗೂ ಕಿಯೋನಿಕ್ಸ್ ಜವಾಬ್ದಾರಿ ಹೊತ್ತಿರುವ ಶರತ್ ಬಚ್ಚೇಗೌಡ ಅವರು ಅತ್ಯುತ್ತಮವಾಗಿ ಕಾರ್ಯ ನಿರ್ವಹಿಸುತ್ತಿದ್ದಾರೆ. ಬೆಂಗಳೂರು ಟೆಕ್ ಸಮ್ಮೇಳನದ ಮೂಲಕ ಮೂರು ದಿನಗಳ ಕಾಲ ಭವಿಷ್ಯದ ಬಗ್ಗೆ ಚರ್ಚಿಸಲಾಗುವುದು ಎಂದು ಸ್ಪಷ್ಟಪಡಿಸಿದ್ದಾರೆ.

<><><><>

ಪ್ರಯಾಣಿಕರ ಅನುಕೂಲಕ್ಕಾಗಿ ಈ ವರ್ಷ ಎರಡು ಸಾವಿರ  ನೂತನ ಬಸ್‌ಗಳನ್ನು ಖರೀದಿಸಲು ತೀರ್ಮಾನಿಸಲಾಗಿದೆ ಎಂದು ಸಾರಿಗೆ ಸಚಿವ ರಾಮಲಿಂಗರೆಡ್ಡಿ ತಿಳಿಸಿದ್ದಾರೆ. ಚಿಕ್ಕಮಗಳೂರು ನಗರದಲ್ಲಿಂದು ನೂತನ ಗ್ರಾಮಾಂತರ ಬಸ್ ನಿಲ್ದಾಣ ಕಟ್ಟಡಕ್ಕೆ ಶಂಕುಸ್ಥಾಪನೆ ನೆರವೇರಿಸಿದ ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಈಗಾಗಲೇ ಸರ್ಕಾರ ೫ ಸಾವಿರದ ೮೦೦

ನೂತನ ಬಸ್‌ಗಳನ್ನು ಖರೀದಿಸಿ ಸಂಚಾರಕ್ಕೆ ವ್ಯವಸ್ಥೆ ಮಾಡಿದೆ. ಈ ವರ್ಷ ೨ ಸಾವಿರ ನೂತನ ಬಸ್‌ಗಳನ್ನು ಖರೀದಿಸಿ ರಾಜ್ಯದಲ್ಲಿ ಅಗತ್ಯ ಇರುವೆಡೆಗೆ ನೀಡಲಾಗುವುದು ಎಂದು ಸ್ಪಷ್ಟಪಡಿಸಿದ್ದಾರೆ. ಸಾರಿಗೆ ನೌಕರರ ವೇತನ ಪರಿಷ್ಕರಣೆ ಬಗ್ಗೆ ಮುಖ್ಯಮಂತ್ರಿಗಳೊಂದಿಗೆ ಚರ್ಚಿಸಲಾಗಿದ್ದು ಶೀಘ್ರದಲ್ಲೇ ವಿಶೇಷ ಸಭೆ ಕರೆಯಲಾಗುವುದು ಎಂದು ಹೇಳಿದ್ದಾರೆ.

<><><><>

ಕೇಂದ್ರ ಸರ್ಕಾರದ ಬೆಂಬಲ ಬೆಲೆ ಯೋಜನೆಯಡಿ ಹೆಸರು ಕಾಳು ಖರೀದಿ ಕೇಂದ್ರಗಳನ್ನು ರಾಜ್ಯ ಸರ್ಕಾರ ಆರಂಭಿಸಿದೆ ಎಂದು ಕಾನೂನು, ಸಂಸದೀಯ ವ್ಯವಹಾರಗಳ ಹಾಗೂ ಪ್ರವಾಸೋದ್ಯಮ ಖಾತೆ ಸಚಿವ ಎಚ್.ಕೆ ಪಾಟಿಲ್ ತಿಳಿಸಿದ್ದಾರೆ. ಹಾವೇರಿಯಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಖರೀದಿ ಕೇಂದ್ರದಲ್ಲಿನ ಮಾನದಂಡಗಳಿಂದ ರೈತರಿಗೆ ಬಹಳಷ್ಟು ಸಮಸ್ಯೆ ಉಂಟಾಗುತ್ತಿದ್ದು, ಈ ಬಗ್ಗೆ ಚರ್ಚಿಸಲು ಸಚಿವ ಸಂಪುಟದ ಉಪಸಮಿತಿ ರಚಿಸಲಾಗಿದೆ ಎಂದು ಹೇಳಿದ್ದಾರೆ. ಖರೀದಿ ಕೇಂದ್ರಗಳ ಮಾನದಂಡಗಳ ಬಗ್ಗೆ ನಾಳೆ ಸಚಿವ ಸಂಪುಟದ ಉಪಸಮಿತಿ ಚರ್ಚೆ ನಡೆಸಲಿದೆ. ಜೊತೆಗೆ ಮೆಕ್ಕೆಜೋಳ ಖರೀದಿ ಬಗ್ಗೆ ಚರ್ಚೆ ನಡೆಸಲಿದೆ ಎಂದು ತಿಳಿಸಿದ್ದಾರೆ.

**ಧ್ವನಿ : ಎಚ್.ಕೆ. ಪಾಟೀಲ್ (೩೭ ಸೆಕೆಂಡ್‌ಗಳು)**

<><><><>

ಮೇಕೆದಾಟು ಯೋಜನೆ ಅನುಷ್ಠಾನಕ್ಕೆ ರಾಜ್ಯ ಸರ್ಕಾರ ಕೇಂದ್ರದ ಜೊತೆಗೆ ಸೌಹಾರ್ದತೆಯಿಂದ ಅನುಮತಿ ಪಡೆದರೆ ಮುಂದೆ ಕಾನೂನು ಹೋರಾಟದಲ್ಲಿ ಅನುಕೂಲವಾಗಲಿದೆ ಎಂದು ಮಾಜಿ ಮುಖ್ಯಮಂತ್ರಿ ಹಾಗೂ ಸಂಸದ ಬಸವರಾಜ್ ಬೊಮ್ಮಾಯಿ ಅಭಿಪ್ರಾಯಪಟ್ಟಿದ್ದಾರೆ. ಬೆಂಗಳೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಈ ವಿಚಾರದಲ್ಲಿ ರಾಜಕೀಯ ಪ್ರತಿಷ್ಠೆ ಮಾಡಿದರೆ ರಾಜ್ಯದ ಹಿತಾಸಕ್ತಿಗೆ ಧಕ್ಕೆಯಾಗಲಿದೆ ಎಂದು ಹೇಳಿದ್ದಾರೆ. ಮೆಕ್ಕೆಜೋಳವನ್ನು ರಾಜ್ಯದ ಬಹುತೇಕ ಭಾಗದಲ್ಲಿ ಬೆಳೆಯುತ್ತಿದ್ದು, ಕಳೆದ ವರ್ಷ ೧೫ ಲಕ್ಷ ಹೆಕ್ಟೇರ್ ಪ್ರದೇಶದಲ್ಲಿ ೫೪ ಲಕ್ಷ ಮೆಟ್ರಿಕ್ ಟನ್ ಬೆಳೆಯಲಾಗಿತ್ತು. ಈ ವರ್ಷ ೧೭ ಲಕ್ಷ ಹೆಕ್ಟೇರ್ ಪ್ರದೇಶದಲ್ಲಿ  ೫೪ ಲಕ್ಷ ಮೆಟ್ರಿಕ್ ಟನ್ ಮೆಕ್ಕೆಜೋಳ ಬೆಳೆಯಲಾಗಿದೆ. ಸುಮಾರು ೨ ಲಕ್ಷ ಹೆಕ್ಟೇರ್ ಪ್ರದೇಶದಲ್ಲಿ ಬೆಳೆ ನಾಶವಾಗಿದೆ. ರೈತರು ಬೀದಿಗಿಳಿದು ಹೋರಾಟ ಮಾಡಲು ಅವಕಾಶ ನೀಡದೇ ಸರ್ಕಾರ ಕೂಡಲೇ ಮೆಕ್ಕೆ ಜೋಳ ಖರೀದಿ ಮಾಡಬೇಕು ಎಂದು ಆಗ್ರಹಿಸಿದ್ದಾರೆ.

<><><><>

ಹುಬ್ಬಳ್ಳಿ-ಧಾರವಾಡ ನಗರಾಭಿವೃದ್ಧಿ ಪ್ರಾಧಿಕಾರ ನೂತನವಾಗಿ ೪೭ ಗ್ರಾಮಗಳನ್ನು ತನ್ನ ವ್ಯಾಪ್ತಿಗೆ ಸೇರ್ಪಡೆಗೊಸಿರುವುದನ್ನು ವಿರೋಧಿಸಿ ರತ್ನಭಾರತ ರೈತ ಸಮಾಜ ವತಿಯಿಂದ ಹುಬ್ಬಳ್ಳಿ ನವನಗರದ ಕಛೇರಿ ಎದುರು ಚಕ್ಕಡಿಗಳೊಂದಿಗೆ ಪ್ರತಿಭಟನೆ ನಡೆಸಿದರು. ಪ್ರತಿಭಟನೆಯಲ್ಲಿ ವಿವಿಧ ಗ್ರಾಮಗಳ ರೈತರು, ರಾಜ್ಯ ಸರ್ಕಾರ, ಹುಬ್ಬಳ್ಳಿ-ಧಾರವಾಡ ಮಹಾನಗರ ಪಾಲಿಕೆ ವಿರುದ್ಧ

ಆಕ್ರೋಶ ವ್ಯಕ್ತಪಡಿಸಿದರು. ಈ ವೇಳೆ ಮಾತನಾಡಿದ ಉಪಾಧ್ಯಕ್ಷ ಹೇಮನಗೌಡ ಬಸನಗೌಡ್ರ, ಹುಡಾ ಶೇಕಡ ೯೫ರಷ್ಟು ರೈತಾಪಿ ವರ್ಗ ಹಾಗೂ ಕೂಲಿ ಕಾರ್ಮಿಕರು ಇರುವ ೪೭ ಗ್ರಾಮಗಳನ್ನು ತನ್ನ ವ್ಯಾಪ್ತಿಗೆ ಸೇರಿಸಿಕೊಂಡಿದ್ದು ಖಂಡನೀಯ ಎಂದು ತಿಳಿಸಿದ್ದಾರೆ. ಸರ್ಕಾರದ ಈ ನಿರ್ಧಾರದಿಂದ ೪೭ ಗ್ರಾಮಗಳ ರೈತರಿಗೆ ತುಂಬಾ ತೊಂದರೆಯಾಗಲಿದೆ. ಈಗ ಹೊರಡಿಸಿರುವ ಆದೇಶವನ್ನು ತಕ್ಷಣವೇ ಹಿಂಪಡೆಯಬೇಕು. ಇಲ್ಲವಾದರೆ ಮುಂದಿನ ದಿನಗಳಲ್ಲಿ ತೀವ್ರ ಹೋರಾಟದ ಎಚ್ಚರಿಕೆ ನೀಡಿದ್ದಾರೆ.

<><> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <><>